# ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ





## ಮೈಕ್ರೋ-ಕ್ರೆಡಿಟ್ (ಪ್ರೇರಣಾ) ಯೋಜನೆ

- ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಮಹಿಳೆಯರ ಆರ್ಥಿಕ ಸ್ವಾವಲಂಬನೆ ಮತ್ತು ಸಬಲೀಕರಣ ಉದ್ದೇಶಕ್ಕಾಗಿ **"ಪ್ರೇರಣಾ ಯೋಜನೆ"** ಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.
- ವ್ಯಾಪಾರ / ಉತ್ಪಾದನೆ / ಸೇವೆಯ ಗುಂಪು ಚಟುವಟಿಕೆಗಳಿಂದ ಗಳಿಸುವ ಆದಾಯವನ್ನು ಸಮಾನವಾಗಿ ಹಂಚಿಕೆ ಮಾಡಿಕೊಂಡು ಆರ್ಥಿಕ ಸ್ವಾವಲಂಬನೆಯನ್ನು ಹೊಂದುವುದು ಈ ಯೋಜನೆಯ ಮೂಲ ಉದ್ದೇಶವಾಗಿರುತ್ತದೆ.
- ಮಹಿಳಾ ಸ್ವ-ಸಹಾಯ ಸಂಘದಲ್ಲಿ ಕನಿಷ್ಟ 10 ಮಹಿಳಾ ಸದಸ್ಯರಿರಬೇಕು.
- ಮಹಿಳಾ ಸ್ವ-ಸಹಾಯ ಸಂಘವು ನೊಂದಣಿಯಾಗಿರಬೇಕು.
- ಮಹಿಳಾ ಸ್ವ-ಸಹಾಯ ಸಂಘದ ಪ್ರತಿ ಸದಸ್ಯರಿಗೆ ರೂ. 15,000/- ಸಹಾಯಧನ, ರೂ. 10,000/- ಸಾಲದಂತೆ ಒಟ್ಟು ಮೊತ್ತವನ್ನು ಸಂಘದ ಖಾತೆಗೆ ಬಿಡುಗಡೆ ಮಾಡಲಾಗುವುದು. ಸಾಲಕ್ಕೆ ವಾರ್ಷಿಕ ಬಡ್ಡಿ ಶೇ.4 ರಷ್ಟು ವಿಧಿಸಲಾಗುತ್ತಿದೆ.

### ಸಾಮಾನ್ಯ ಅರ್ಹತೆಗಳು:

1. ಅರ್ಜಿದಾರರು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು.
2. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
3. ಅರ್ಜಿದಾರರು 21 ವರ್ಷ ಮೇಲ್ಪಟ್ಟ ವಯೋಮಾನದವರಾಗಿರಬೇಕು.
4. ಅರ್ಜಿದಾರರ ಕುಟುಂಬದ ವಾರ್ಷಿಕ ವರ ಮಾನವು ರೂ.1,50,000/-ಗ್ರಾಮೀಣ ಹಾಗೂ ರೂ.2,00,000/- ನಗರ ಪ್ರದೇಶದವರಿಗೆ ಮಿತಿಯೊಳಗಿರಬೇಕು.

5. ಅರ್ಜಿದಾರರು/ಕುಟುಂಬದ ಅವಲಂಭಿತ ಯಾವುದೇ ಸದಸ್ಯರು ಈ ಹಿಂದೆ ನಿಗಮ/ ಸರ್ಕಾರದಿಂದ ರೂ.1,00,000/- ಮೇಲ್ಪಟ್ಟ ಸೌಲಭ್ಯ ಪಡೆದಿದ್ದಲ್ಲಿ, ಅಂತಹ ಫಲಾನುಭವಿಗಳು ಈ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.
6. ಅರ್ಜಿದಾರರು ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರಾಗಿರಬೇಕು ಅಥವಾ ಹೊಸದಾಗಿ ಸದಸ್ಯತ್ವವನ್ನು ಪಡೆಯಬೇಕು.
7. ಸ್ವಯಂ ಉದ್ಯೋಗ ಬಯಸಿದಲ್ಲಿ ಘಟಕವನ್ನು ಸ್ಥಾಪಿಸಲು ಕನಿಷ್ಟ 200 ಚದರ ಅಡಿ ಸ್ಥಳಾವಕಾಶವನ್ನು ಹೊಂದಿರಬೇಕು. (ಸ್ವಂತ/ಬಾಡಿಗೆ/ಲೀಸ್)
8. ಅರ್ಜಿದಾರರು ಸ್ವ-ಸಹಾಯ ಸಂಘದ ಭಾಗವಾಗಿ ಇರುವ ಬಗ್ಗೆ ಮತ್ತು ಗುಂಪು ಚಟುವಟಿಕೆಗಳಲ್ಲಿ ಭಾಗವಹಿಸಿ ವ್ಯಾಪಾರ-ವಹಿವಾಟನ್ನು ನಿರ್ವಹಿಸಿ ಆದಾಯವನ್ನು ಮಾತ್ರ ಪಡೆಯುವ ಬಗ್ಗೆ ಲಿಖಿತ ಒಪ್ಪಿಗೆ ನೀಡಬೇಕು. ನಿಗಮ ನೀಡುವ ಬೀಜಧನಸಾಲ ಮತ್ತು ಸಹಾಯಧನವನ್ನು ಮೂಲ ಬಂಡವಾಳವನ್ನಾಗಿ ಬಳಸಬೇಕು.
9. ಮಂಜೂರಾತಿ ಪಡೆದ ಫಲಾನುಭವಿಯು ಅನರ್ಹರೆಂದು ಕಂಡು ಬಂದಲ್ಲಿ ಮಂಜೂರಾತಿಯನ್ನು ಯಾವುದೇ ಹಂತದಲ್ಲಿ ರದ್ದು ಪಡಿಸಲಾಗುತ್ತದೆ.

**ಷರತ್ತುಗಳು:**

1. ಅರ್ಜಿದಾರರು/ಸಂಘ ಆಯ್ಕೆ ಸಮಿತಿಯ ಮೂಲಕ ಆಯ್ಕೆಯಾಗಬೇಕು.
2. ಮಂಜೂರಾತಿ ಪಡೆದ ಫಲಾನುಭವಿಯು ಅನರ್ಹರೆಂದು ಕಂಡು ಬಂದಲ್ಲಿ ಮಂಜೂರಾತಿಯನ್ನು ಯಾವುದೇ ಹಂತದಲ್ಲಿ ರದ್ದು ಪಡಿಸಲಾಗುತ್ತದೆ.
3. ಮಂಜೂರಾತಿ ಪಡೆದ ಸಂಘವು ಎಲ್ಲಾ ಸದಸ್ಯರ ಸಹಯೋಗದಲ್ಲಿ ಉದ್ದೇಶಿತ ಚಟುವಟಿಕೆಯನ್ನು ಆರಂಭಿಸಬೇಕು.